ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**16.12.2025 1.10 p.m.**

**<><><><>**

ಮುಖ್ಯಾಂಶಗಳು

1. ಮೂರು ರಾಷ್ಟ್ರಗಳ ಪ್ರವಾಸದ ಎರಡನೇ ಚರಣದಲ್ಲಿ ಇಥಿಯೋಪಿಯಾಗೆ ಇಂದು ಪ್ರಧಾನಿ ನರೇಂದ್ರ ಮೋದಿ ಭೇಟಿ
2. ಕರ್ನಾಟಕಕ್ಕೆ ಇಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಆಗಮನ; ಜೆ.ಎಸ್.ಎಸ್. ಜಯಂತಿ ಕಾರ್ಯಕ್ರಮದಲ್ಲಿ ಭಾಗಿ
3. ಲೋಕಸಭೆಯಲ್ಲಿ ವಿಕಸಿತ ಭಾರತ - ರೋಜ್‌ಗಾರ್ ಮತ್ತು ಆಜೀವಿಕಾ ಮಿಷನ್ ಗ್ರಾಮೀಣ ವಿಧೇಯಕ ೨೦೨೫ ಮಂಡನೆ
4. ಭಾರತ-ಮಧ್ಯಪ್ರಾಚ್ಯ-ಯುರೋಪ್ ಆರ್ಥಿಕ ಕಾರಿಡಾರ್ ಅನುಷ್ಠಾನಕ್ಕೆ ಬದ್ಧ; ಭಾರತ, ಯುಎಇ ಪುನರುಚ್ಚಾರ
5. ಹತ್ತೊಂಬತ್ತು ವರ್ಷದೊಳಗಿನ ಏಷ್ಯಕಪ್ ಏಕದಿನ ಕ್ರಿಕೆಟ್; ಮಲೇಷಿಯಾ ವಿರುದ್ಧ ಬೃಹತ್ ಮೊತ್ತದತ್ತ ಭಾರತ

<><><><>

ಮೂರು ರಾಷ್ಟ್ರಗಳ ಭೇಟಿಯ ಎರಡನೇ ಚರಣದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು, ಎರಡು ದಿನಗಳ ಭೇಟಿಗಾಗಿ ಇಂದು ಸಂಜೆ ಇಥಿಯೋಪಿಯಾದ ರಾಜಧಾನಿ ಅಡಿಸ್ ಅಬಾಬಾಗೆ ತಲುಪಲಿದ್ದಾರೆ. ಅವರು ಇಥಿಯೋಪಿಯಾ ಪ್ರಧಾನಿ ಡಾ. ಅಬಿಯ್ ಅಹ್ಮದ್ ಅಲಿ ಅವರೊಂದಿಗೆ ದ್ವಿಪಕ್ಷೀಯ ಸಂಬಂಧಗಳ ಎಲ್ಲಾ ಅಂಶಗಳ ಕುರಿತು ವ್ಯಾಪಕ ಚರ್ಚೆ ನಡೆಸಲಿದ್ದಾರೆ. ಜಾಗತಿಕ ದಕ್ಷಿಣದಲ್ಲಿ ಪಾಲುದಾರರಾಗಿ, ಪ್ರಧಾನ ಮಂತ್ರಿಯವರ ಭೇಟಿಯು ಸ್ನೇಹದ ನಿಕಟ ಸಂಬಂಧಗಳನ್ನು ಬಲಪಡಿಸುವ ಮತ್ತು ದ್ವಿಪಕ್ಷೀಯ ಸಹಕಾರವನ್ನು ವಿಸ್ತರಿಸುವ ಎರಡೂ ದೇಶಗಳ ಹಂಚಿಕೆಯ ಬದ್ಧತೆಯನ್ನು ಪುನರುಚ್ಚರಿಸುತ್ತದೆ. ಇದಕ್ಕೂ ಮುನ್ನ ಪ್ರಧಾನಿ ನರೇಂದ್ರ ಮೋದಿ ಅವರು ಅಮನ್‌ನಲ್ಲಿ ನಿನ್ನೆ ಜೋರ್ಡಾನ್ ದೊರೆ ಎರಡನೇ ಅಬ್ದುಲ್ಲಾ ಇಬ್ನ್ ಅಲ್ ಹುಸೇನ್ ಅವರೊಂದಿಗೆ ನಿಯೋಗ ಮಟ್ಟದ ಮಾತುಕತೆ ನಡೆಸಿದರು. ೭೫ ವರ್ಷಗಳ ರಾಜತಾಂತ್ರಿಕ

ಸಂಬಂಧಗಳನ್ನು ಆಚರಿಸಲು ಸಿದ್ಧತೆ ನಡೆಸುತ್ತಿರುವ ಈ ಸಂದರ್ಭದಲ್ಲಿ ಭಾರತ-ಜೋರ್ಡಾನ್ ನಡುವಿನ ನಿಕಟ ಪಾಲುದಾರಿಕೆಯನ್ನು ಒತ್ತಿ ಹೇಳಿದರು.

ಭಯೋತ್ಪಾದನೆ, ಉಗ್ರವಾದ ಮತ್ತು ಮೂಲಭೂತವಾದದ ವಿರುದ್ಧ ಜೋರ್ಡಾನ್‌ನ ದೃಢನಿಶ್ಚಯದ ನಿಲುವನ್ನು ಪ್ರಧಾನಿ ಮೋದಿ ಶ್ಲಾಘಿಸಿದರು. ಭಯೋತ್ಪಾದನೆಯನ್ನು ಎದುರಿಸುವಲ್ಲಿ ಭಾರತ ಮತ್ತು ಜೋರ್ಡಾನ್ ಸಾಮಾನ್ಯ ವಿಧಾನವನ್ನು ಹಂಚಿಕೊಂಡಿವೆ ಎಂದು ಅವರು ಹೇಳಿದರು. ಪ್ರವಾಸದ ಅಂತಿಮ ಚರಣದಲ್ಲಿ, ಪ್ರಧಾನಿ ನರೇಂದ್ರ ಮೋದಿ ಅವರು, ಒಮಾನ್‌ಗೆ ಭೇಟಿ ನೀಡಲಿದ್ದು, ಸುಲ್ತಾನ್ ಹೈತಮ್ ಇಬ್ನ್ ತಾರಿಕ್ ಅವರನ್ನು ಭೇಟಿ ಮಾಡಲಿದ್ದಾರೆ. ಈ ಭೇಟಿಯು ಎರಡೂ ದೇಶಗಳ ನಡುವಿನ ರಾಜತಾಂತ್ರಿಕ ಸಂಬಂಧಗಳ ಸ್ಥಾಪನೆಯ ೭೦ ವರ್ಷಗಳನ್ನು ಗುರುತಿಸುತ್ತದೆ.

<><><><>

ರಾಷ್ಟ್ರಪತಿ ದ್ರೌಪದಿ ಮುರ್ಮು ಇಂದಿನಿಂದ ಕರ್ನಾಟಕ, ತಮಿಳುನಾಡು ಮತ್ತು ತೆಲಂಗಾಣಕ್ಕೆ ಏಳು ದಿನಗಳ ಭೇಟಿ ನೀಡಲಿದ್ದಾರೆ. ರಾಷ್ಟ್ರಪತಿಯವರು ಇಂದು ಕರ್ನಾಟಕದ ಮಳವಳ್ಳಿಯಲ್ಲಿ ಆದಿ ಜಗದ್ಗುರು ಶ್ರೀ ಶಿವರಾತ್ರೀಶ್ವರ ಶಿವಯೋಗಿ ಮಹಾಸ್ವಾಮೀಜಿ ಅವರ ೧೦೬೬ ನೇ ಜಯಂತಿ ಆಚರಣೆಯನ್ನು ಉದ್ಘಾಟಿಸಲಿದ್ದಾರೆ. ನಾಳೆ ಅವರು ತಮಿಳುನಾಡಿನ ವೆಲ್ಲೂರಿನ ಸುವರ್ಣ ದೇವಾಲಯದಲ್ಲಿ ದರ್ಶನ ಮತ್ತು ಆರತಿ ಮಾಡಲಿದ್ದಾರೆ. ನಂತರ, ಅವರು ಚಳಿಗಾಲದ ವಾಸ್ತವ್ಯಕ್ಕಾಗಿ ಸಿಕಂದರಾಬಾದ್‌ನ ಬೊಲಾರಂನಲ್ಲಿರುವ ರಾಷ್ಟ್ರಪತಿ ನಿಲಯವನ್ನು ತಲುಪಲಿದ್ದಾರೆ. ಇದೇ ೧೯ ರಂದು ಹೈದರಾಬಾದ್‌ನಲ್ಲಿ ತೆಲಂಗಾಣ ಸಾರ್ವಜನಿಕ ಸೇವಾ ಆಯೋಗವು ಆಯೋಜಿಸಿರುವ ಸಾರ್ವಜನಿಕ ಸೇವಾ ಆಯೋಗಗಳ ಅಧ್ಯಕ್ಷರಿಗಾಗಿ ರಾಷ್ಟ್ರೀಯ ಸಮ್ಮೇಳನವನ್ನು ರಾಷ್ಟ್ರಪತಿಯವರು ಉದ್ಘಾಟಿಸಲಿದ್ದಾರೆ. ಇದೇ ೨೦ ರಂದು, ಹೈದರಾಬಾದ್‌ನಲ್ಲಿ ಬ್ರಹ್ಮಕುಮಾರಿ ಶಾಂತಿ ಸರೋವರವು ತನ್ನ ೨೧ನೇ ವಾರ್ಷಿಕೋತ್ಸವವನ್ನು ಆಚರಿಸಲು ಆಯೋಜಿಸಿರುವ 'ಭಾರತದ ಕಾಲಾತೀತ ಜ್ಞಾನ: ಶಾಂತಿ ಮತ್ತು ಪ್ರಗತಿಯ ಹಾದಿಗಳು' ಕುರಿತು ಸಮ್ಮೇಳನವನ್ನು ಉದ್ದೇಶಿಸಿ ರಾಷ್ಟ್ರಪತಿ ದ್ರೌಪದಿ ಮುರ್ಮು ಮಾತನಾಡಲಿದ್ದಾರೆ.

<><><><>

ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಅವರು ಲೋಕಸಭೆಯಲ್ಲಿಂದು ವಿಕಸಿತ ಭಾರತ - ರೋಜ್‌ಗಾರ್ ಮತ್ತು ಆಜೀವಿಕಾ ಮಿಷನ್ ಗ್ರಾಮೀಣ ವಿಧೇಯಕ ೨೦೨೫ ಅನ್ನು ಮಂಡಿಸಿದರು. ವಿಧೇಯಕ ಮಂಡನೆಗೆ ಪ್ರತಿಪಕ್ಷಗಳು ವಿರೋಧ ವ್ಯಕ್ತಪಡಿಸಿದವು. ಈ ವಿಧೇಯಕವು, ಇಪ್ಪತ್ತು ವರ್ಷ ಹಳೆಯದಾದ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಕಾಯ್ದೆ, ೨೦೦೫ ಅನ್ನು ಬದಲಾಯಿಸಲಿದೆ. ಪ್ರಮುಖವಾಗಿ ಕೌಶಲ್ಯ ರಹಿತ ಗ್ರಾಮೀಣ ಕುಟುಂಬಕ್ಕೆ ವಾರ್ಷಿಕ ೧೨೫ ದಿನಗಳ ಉದ್ಯೋಗವನ್ನು ಖಾತರಿಪಡಿಸುತ್ತದೆ. ಇದು ಉತ್ಪಾದಕತೆ, ಹೆಚ್ಚಿನ ಆದಾಯ ಮತ್ತು ಉತ್ತಮ ಸ್ಥಿತಿಸ್ಥಾಪಕತ್ವದ ಮೂಲಕ ಗ್ರಾಮೀಣ ಆರ್ಥಿಕತೆಯನ್ನು ಬಲಪಡಿಸಲಿದೆ.

<><><>

ಭಾರತ-ಮಧ್ಯಪ್ರಾಚ್ಯ-ಯುರೋಪ್ ಆರ್ಥಿಕ ಕಾರಿಡಾರ್ ಅನುಷ್ಠಾನಕ್ಕೆ ಭಾರತ ಮತ್ತು ಯುಎಇ, ತಮ್ಮ ಬದ್ಧತೆಯನ್ನು ಪುನರುಚ್ಚರಿಸಿವೆ. ಅಬುಧಾಬಿಯಲ್ಲಿ ನಡೆದ ೧೬ನೇ ಭಾರತ-ಯುಎಇ ಜಂಟಿ ಆಯೋಗ ಸಭೆ ಮತ್ತು ಭಾರತ-ಯುಎಇ ಕಾರ್ಯತಂತ್ರದ ಸಂವಾದದ ೫ ನೇ ಸುತ್ತಿನ ಸಹ ಅಧ್ಯಕ್ಷತೆಯನ್ನು ವಿದೇಶಾಂಗ ವ್ಯವಹಾರಗಳ ಸಚಿವ ಡಾ.ಎಸ್.ಜೈಶಂಕರ್ ಮತ್ತು ಯುಎಇ ವಿದೇಶಾಂಗ ಸಚಿವ ಶೇಖ್ ಅಬ್ದುಲ್ಲಾ ಬಿನ್ ಜಾಯೆದ್ ಅಲ್ ನಹ್ಯಾನ್ ವಹಿಸಿದ್ದರು. ಈ ವೇಳೆ, ವ್ಯಾಪಾರ, ಹೂಡಿಕೆ, ಇಂಧನ, ಸಂಪರ್ಕ, ರಕ್ಷಣೆ, ಭದ್ರತೆ, ಅಭಿವೃದ್ಧಿ ಪಾಲುದಾರಿಕೆ, ತಂತ್ರಜ್ಞಾನ, ಆರೋಗ್ಯ, ಸಂಸ್ಕೃತಿ, ಶಿಕ್ಷಣ ಮತ್ತು ಜನರಿಂದ ಜನರ ನಡುವಿನ ಸಂಬಂಧಗಳಲ್ಲಿ ಪರಸ್ಪರ ಸಹಕಾರ ಕುರಿತು ಚರ್ಚಿಸಲಾಯಿತು. ಪಶ್ಚಿಮ ಏಷ್ಯಾದ ಪರಿಸ್ಥಿತಿ ಸೇರಿದಂತೆ ಪರಸ್ಪರ ಆಸಕ್ತಿಯ ಪ್ರಾದೇಶಿಕ ಮತ್ತು ಜಾಗತಿಕ ವಿಷಯಗಳ ಕುರಿತು ಉಭಯ ನಾಯಕರು ಅಭಿಪ್ರಾಯಗಳನ್ನು ವಿನಿಮಯ ಮಾಡಿಕೊಂಡರು. ಪ್ರಾದೇಶಿಕ ಶಾಂತಿ, ಸ್ಥಿರತೆ ಮತ್ತು ಸಮೃದ್ಧಿಯನ್ನು ರಕ್ಷಿಸುವ ಮತ್ತು ಉತ್ತೇಜಿಸುವ ಹಂಚಿಕೆಯ ಆಸಕ್ತಿಯನ್ನು ಅವರು ಪುನರುಚ್ಚರಿಸಿದರು. ಮುಂದಿನ ವರ್ಷ ನವದೆಹಲಿಯಲ್ಲಿ ನಡೆಯಲಿರುವ ಎಐ ಇಂಪ್ಯಾಕ್ಟ್ ಶೃಂಗಸಭೆಗೆ ಮತ್ತು ೨೦೨೬ ರಲ್ಲಿ ಭಾರತದ ಬ್ರಿಕ್ಸ್ ಅಧ್ಯಕ್ಷತೆಗೆ ಯುಎಇ ತನ್ನ ಬೆಂಬಲವನ್ನು ವ್ಯಕ್ತಪಡಿಸಿದೆ ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ.

<><><>

ರಾಷ್ಟ್ರವು ಇಂದು ವಿಜಯ ದಿವಸ್ ಆಚರಿಸುತ್ತಿದೆ. ೧೯೭೧ ರ ಯುದ್ಧದಲ್ಲಿ ಪಾಕಿಸ್ತಾನದ ವಿರುದ್ಧ ಭಾರತ ಸಾಧಿಸಿದ ವಿಜಯದ ಸ್ಮರಣಾರ್ಥ ಪ್ರತಿ ವರ್ಷ ಈ ದಿನದಂದು, ವಿಜಯ ದಿವಸ್

ಆಚರಿಸಲಾಗುವುದು. ಪ್ರತಿಯೊಬ್ಬ ಭಾರತೀಯರಿಗೂ ಸ್ಫೂರ್ತಿ ನೀಡುವ ಮತ್ತು ರಾಷ್ಟ್ರೀಯ ಹೆಮ್ಮೆಯ ಮೂಲವಾಗಿ ಉಳಿದಿರುವ ಧೈರ್ಯಶಾಲಿಗಳ ಅಂತಿಮ ತ್ಯಾಗವನ್ನು ರಾಷ್ಟ್ರವು ಸ್ಮರಿಸುತ್ತದೆ. ೧೯೭೧ ರ ಈ ದಿನದಂದು, ಪಾಕಿಸ್ತಾನಿ ಪಡೆಗಳ ಮುಖ್ಯಸ್ಥ ಜನರಲ್ ಎ.ಎ.ಖಾನ್ ನಿಯಾಜಿ, ೯೩ ಸಾವಿರ ಸೈನಿಕರೊಂದಿಗೆ, ಭಾರತೀಯ ಸೇನೆಗೆ ಶರಣಾದರು. ಯುದ್ಧದ ಅಂತ್ಯವು ಪೂರ್ವ ಪಾಕಿಸ್ತಾನವನ್ನು ಬೇರ್ಪಡಿಸಿ, ಬಾಂಗ್ಲಾದೇಶ ಉದಯಕ್ಕೆ ಕಾರಣವಾಯಿತು. ವಿಜಯ್ ದಿವಸ್ ಅಂಗವಾಗಿ ಇಂದು ನವದೆಹಲಿಯಲ್ಲಿರುವ ರಾಷ್ಟ್ರೀಯ ಯುದ್ಧ ಸ್ಮಾರಕಕ್ಕೆ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಪುಷ್ಪ ನಮನ ಅರ್ಪಿಸಿದರು. ರಕ್ಷಣಾ ಸಚಿವರೊಂದಿಗೆ ರಕ್ಷಣಾ ಪಡೆಗಳ ಮುಖ್ಯಸ್ಥ ಜನರಲ್ ಅನಿಲ್ ಚೌಹಾಣ್, ಭಾರತೀಯ ಸೇನಾ ಮುಖ್ಯಸ್ಥ ಜನರಲ್ ಉಪೇಂದ್ರ ದ್ವಿವೇದಿ, ವಾಯುಪಡೆಯ ಮುಖ್ಯಸ್ಥ ಏರ್ ಚೀಫ್ ಮಾರ್ಷಲ್ ಎ.ಪಿ.ಸಿಂಗ್ ಮತ್ತು ನೌಕಾಪಡೆಯ ಮುಖ್ಯಸ್ಥ ಅಡ್ಮಿರಲ್ ದಿನೇಶ್ ಕೆ. ತ್ರಿಪಾಠಿ ಉಪಸ್ಥಿತರಿದ್ದರು.

<><><>

ವಿಜಯ್ ದಿವಸ್ ಹಿನ್ನಲೆಯಲ್ಲಿ ರಾಷ್ಟ್ರದ ಸೇವೆಯಲ್ಲಿ ಅತ್ಯುನ್ನತ ತ್ಯಾಗ ಮಾಡಿದ ಧೈರ್ಯಶಾಲಿ ಯೋಧರಿಗೆ ರಾಜ್ಯಸಭೆಯು ಗೌರವ ಸಲ್ಲಿಸಿತು. ಇಂದು ಬೆಳಗ್ಗೆ ೧೧ ಗಂಟೆಗೆ ಸದನ ಸಮಾವೇಶಗೊಂಡಾಗ ರಾಜ್ಯಸಭಾ ಸಭಾಪತಿ ಸಿ.ಪಿ.ರಾಧಾಕೃಷ್ಣನ್ ಅವರು, ರಾಷ್ಟ್ರವನ್ನು ಐತಿಹಾಸಿಕ ವಿಜಯದತ್ತ ಕೊಂಡೊಯ್ದ ಭಾರತ ಧೈರ್ಯಶಾಲಿ ಸಶಸ್ತ್ರಪಡೆಗಳ ಶೌರ್ಯ ಮತ್ತು ದೃಢ ಸಂಕಲ್ಪಕ್ಕೆ ನಮನ ಸಲ್ಲಿಸಿದರು. ಈ ಯುದ್ಧವು ಸ್ವತಂತ್ರ ರಾಷ್ಟ್ರವಾದ ಬಾಂಗ್ಲಾದೇಶ ಉದಯಕ್ಕೆ ಕಾರಣವಾಯಿತು. ನ್ಯಾಯ, ಘನತೆ ಮತ್ತು ಸ್ವಾತಂತ್ರ್ಯಕ್ಕೆ ಅಚಲ ಬದ್ಧತೆಯನ್ನು ಇದು ದೃಢಪಡಿಸಿದೆ. ೧೩ ದಿನಗಳ ಈ ಯುದ್ಧವು ಭಾರತದ ಮಿಲಿಟರಿ ಸಾಮರ್ಥ್ಯವನ್ನು ಪ್ರದರ್ಶಿಸಿತು. ಭಾರತದ ಸಶಸ್ತ್ರಪಡೆಗಳ ಧೈರ್ಯ ಮತ್ತು ಶೌರ್ಯದ ಪರಂಪರೆಯು ರಾಷ್ಟ್ರದ ಸೌರ್ವಭೌಮತ್ವ ಮತ್ತು ಸಮಗ್ರತೆಯನ್ನು ಕಾಪಾಡುವ ಸಾಮೂಹಿಕ ಸಂಕಲ್ಪದಲ್ಲಿ ಜನರಿಗೆ ಮಾರ್ಗದರ್ಶನ ನೀಡುತ್ತದೆ ಎಂದು ರಾಜ್ಯಸಭಾ ಸಭಾಪತಿ ಸಿ.ಪಿ.ರಾಧಾಕೃಷ್ಣನ್ ಹೇಳಿದರು.

<><><>

ಭಾರತದ ನಿರುದ್ಯೋಗ ದರ, ಈ ವರ್ಷದ ನವೆಂಬರ್‌ನಲ್ಲಿ ಶೇಕಡ ೪.೭ ಕ್ಕೆ ಇಳಿದಿದೆ. ಇದು ಏಪ್ರಿಲ್ ನಂತರದ ಅತ್ಯಂತ ಕಡಿಮೆ ಮಟ್ಟವಾಗಿದೆ. ಅಂಕಿ-ಅಂಶ ಮತ್ತು ಕಾರ್ಯಕ್ರಮ ಅನುಷ್ಠಾನ ಸಚಿವಾಲಯದ ಮಾಸಿಕ ಕಾರ್ಮಿಕ ಬಲ ಮತ್ತು ನಿರುದ್ಯೋಗ ದತ್ತಾಂಶದ ಪ್ರಕಾರ, ಗ್ರಾಮೀಣ

ನಿರುದ್ಯೋಗ ದರ, ಶೇಕಡ ೩.೯ ರ ಕನಿಷ್ಠ ಮಟ್ಟಕ್ಕೆ ಇಳಿದಿದೆ. ನಗರ ನಿರುದ್ಯೋಗ ದರ, ಶೇಕಡ ೬.೫ ಕ್ಕೆ ಇಳಿದಿದೆ. ಇದು ಈ ವರ್ಷದ ಆರಂಭದಲ್ಲಿ ದಾಖಲಾದ ಅತ್ಯಂತ ಕಡಿಮೆ ಮಟ್ಟಕ್ಕೆ ಸಮನಾಗಿದೆ.

<><><><>

ಮೆಕ್ಸಿಕೋದ ಸ್ಯಾನ್ ಮಾಟಿಯೊ ಅಟೆಂಕೊದಲ್ಲಿ ವಿಮಾನ ದುರಂತ ಸಂಭವಿಸಿದ್ದು, ಏಳು ಜನರು ಮೃತಪಟ್ಟಿದ್ದಾರೆ.

ಟೊಲುಕಾ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಿಂದ ೫.೭ ಕಿಲೋಮೀಟರ್ ದೂರದಲ್ಲಿರುವ ಕೈಗಾರಿಕಾ ಪ್ರದೇಶದಲ್ಲಿ ಸಣ್ಣ ವಿಮಾನ ಅಪಘಾತಕ್ಕೀಡಾಗಿದೆ ಎಂದು ಸ್ಥಳೀಯ ಅಧಿಕಾರಿಗಳು ತಿಳಿಸಿದ್ದಾರೆ.

<><><><>

ದುಬೈನ ಸೆವೆನ್ಸ್ ಕ್ರೀಡಾಂಗಣದಲ್ಲಿಂದು ನಡೆಯುತ್ತಿರುವ ಹತ್ತೊಂಬತ್ತು ವರ್ಷದೊಳಗಿನ ಪುರುಷರ ಏಷ್ಯಾ ಕಪ್ ಕ್ರಿಕೆಟ್‌ನ ಮೂರನೇ ಗುಂಪು ಹಂತದ ಏಕದಿನ ಪಂದ್ಯದಲ್ಲಿ ಭಾರತ ಮತ್ತು ಮಲೇಷ್ಯಾ ಮುಖಾಮುಖಿಯಾಗಿವೆ.

ಟಾಸ್ ಗೆದ್ದ ಮಲೇಷ್ಯಾ ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿದೆ. ಮೊದಲು ಬ್ಯಾಟಿಂಗ್ ಮಾಡುತ್ತಿರುವ ಭಾರತ ತಂಡ, ಇತ್ತೀಚಿನ ವರದಿ ಬಂದಾಗ ೪೧ ಓವರ್‌ಗಳಲ್ಲಿ ೪ ವಿಕೆಟ್ ನಷ್ಟಕ್ಕೆ ೧೯೭ ರನ್ ಮಾಡಿ ಆಡುತ್ತಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>